**ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ನ್ಯಾಯಾಲಯ, ಶ್ರೀರಂಗಪಟ್ಟಣ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 38/2018**

**ಚಾ.ಸಾ. :- 08**
**ಪ್ರಾ.ಸಾ. :- 09**

| | | |
|---|---|---|
| ಹೆಸರು | : | ಭೈರವೇಶ್ವರ |
| ತಂದೆಯ ಹೆಸರು | : | ಲೇಟ್ ರಾಮಯ್ಯ |
| ವಯಸ್ಸು | : | 50 ವರ್ಷ |
| ಉದ್ಯೋಗ | : | ಅಡುಗೆ ಭಟ್ಟರು |
| ವಾಸಸ್ಥಳ | : | ಕಳಸ್ತವಾಡಿ ಗ್ರಾಮ. |

**ಪ್ರಮಾಣೀಕರಿಸಲಾದ ದಿನಾಂಕಃ- 08.09.2025.**

**ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :**

ಈಗ ನೋಡುತ್ತಿರುವ ದಾಖಲೆಯಲ್ಲಿರುವ ಸಹಿ ನನ್ನದು. ಸಾಕ್ಷಿಯ ಸಹಿ ಇರುವ ದಾಖಲೆಯು ಮಹಜರ್ ಆಗಿದ್ದು, ಅದನ್ನು ಈಗಾಗಲೇ ನಿಪಿ-3 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು. ರಸ್ತೆ ಅಪಘಾತಕ್ಕೆ ಸಂಬಂಧಿಸಿದಂತೆ ಸದರಿ ಮಹಜರ್ ಗೆ ನಾನು ಸಹಿ ಮಾಡಿರುತ್ತೇನೆ. ಸದರಿ ಸಹಿಯನ್ನು ನಾನು ಅಪಘಾತ ಸ್ಥಳದಲ್ಲಿ ಮಾಡಿರುತ್ತೇನೆ. ಸದರಿ ದಾಖಲೆಗೆ ಸಹಿ ಮಾಡುವಾಗ ನನ್ನ ಸಮಕ್ಷಮ ಪೊಲೀಸರು ಅಪಘಾತಕ್ಕೆ ಸಂಬಂಧಿಸಿದಂತೆ ವಾಹನಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ.

(ಈ ಹಂತದಲ್ಲಿ ಸ.ಸ.ಅ.ರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸುವಂತೆ ಕೋರಿಕೊಂಡ ಮೇರೆಗೆ ದಾಖಲೆಗಳನ್ನು ಪರಿಶೀಲಿಸಿ, ಸ.ಸ.ಅ. ವಾದವನ್ನು ಆಲಿಸಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅವಕಾಶ ನೀಡಲಾಯಿತು.)

**<u>ಪಾಟೀ ಸವಾಲು : ಮಾನ್ಯ ಸ.ಸ.ಅ.ರವರಿಂದ :</u>**

ದಿನಾಂಕಃ 16.01.2018 ರಂದು ಪೊಲೀಸರು ನನ್ನ ಸಮಕ್ಷಮ ಸದರಿ ಮಹಜರ್ ಬರೆದಿದ್ದು, ಆ ಸಮಯದಲ್ಲಿ ಸ್ಥಳದಿಂದ ಅಪಘಾತಕ್ಕೆ ಸಂಬಂಧಿಸಿದಂತೆ 1 ವಾಹನವನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ.

ನಿಪಿ-3 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುತ್ತದೆ ಹಾಗೂ ಓದಿ ನೋಡಿಯೇ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು : ಆರೋಪಿ ಪರ ವಕೀಲರಿಂದ :</u>**

ನಿಪಿ-3 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಎಲ್ಲವನ್ನು ಬರೆದ ನಂತರ ಪೊಲೀಸ್ ಠಾಣೆಯಲ್ಲಿ ನನ್ನ ಸಹಿ ಪಡೆದುಕೊಂಡಿರುತ್ತಾರೆ ಎಂದರೆ ಸರಿ. ದ್ವಿಚಕ್ರ ವಾಹನದ ನೋಂದಣಿ ಸಂಖ್ಯೆ ನನಗೆ ಗೊತ್ತಿಲ್ಲ. ಸ್ಥಳದ ಚೆಕ್ಕುಬಂದಿಯನ್ನು ನನಗೆ ಹೇಳಲಾಗುವುದಿಲ್ಲ. ಅಪಘಾತವಾದ ದಿನದ ಹಿಂದಿನ ದಿವಸ ಲಕ್ಷದೀಪ ಇದ್ದ ಕಾರಣ ಸಾಕಷ್ಟು ಜನರು ಹಾಗೂ ವಾಹನಗಳು ಓಡಾಡುತ್ತಿರುತ್ತವೆ ಎಂದರೆ ಸರಿ. ಪೊಲೀಸರು ನೋಟೀಸ್ ಕೊಟ್ಟಿಲ್ಲ. ಮೃತರು ನಮ್ಮ ಊರಿನವರಾದ ಕಾರಣ ಪ್ರಕರಣಕ್ಕೆ ಅನುಕೂಲವಾಗುವಂತೆ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆ :- ಇಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**